**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE/ADMI0/EST(8)/2/2021

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಬೆಂಗಳೂರು-560001,
ದಿನಾಂಕ: 29/07/2021

# ಹಿಂಬರಹ

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ:ಆಇ 18 ಎಸ್ಆರ್‌ಪಿ 2021 ಬೆಂಗಳೂರು ದಿ:26-07-2021 ರ ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಕಳುಹಿಸಿಕೊಡಲಾಗಿದೆ.

**ಆಡಳಿತಾಧಿಕಾರಿ**
**ತಾಂತ್ರಿಕ ಶಿಕ್ಷಣ ಇಲಾಖೆ**

**ಇವರಿಗೆ:**

1. ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಮತ್ತು ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ. (ಇಲಾಖಾ ವೆಬ್‌ಸೈಟ್ ಮುಖಾಂತರ).
2. ಆಯುಕ್ತಾಲಯದ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ, ಜಂಟಿ ನಿರ್ದೇಶಕರು (ಆಡಳಿತ), ಆಡಳಿತಾಧಿಕಾರಿ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಮತ್ತು ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ.
3. ಆಯುಕ್ತರ ಆಪ್ತಶಾಖೆಗೆ.
4. ನಿರ್ದೇಶಕರ ಆಪ್ತಶಾಖೆಗೆ.
5. ಆಯುಕ್ತಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:- ತುಟ್ಟಿಭತ್ಯೆಯ ದರಗಳ ಪರಿಷ್ಕರಣೆ.**

ಓದಲಾಗಿದೆ:
(1) ದಿನಾಂಕ: 19.04.2018ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 6 ಎಸ್‌ಆರ್‌ಪಿ 2018
(2) ದಿನಾಂಕ: 18.06.2018ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 12 ಎಸ್‌ಆರ್‌ಪಿ 2018
(3) ದಿನಾಂಕ: 12.10.2018ರ ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ 21 ಎಸ್‌ಆರ್‌ಪಿ 2018
(4) ದಿನಾಂಕ: 28.03.2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 1 ಎಸ್‌ಆರ್‌ಪಿ 2019
(5) ದಿನಾಂಕ: 19.10.2019ರ ಸರ್ಕಾರಿ ಆದೇಶ ಸಂಖ್ಯೆ: ಆಇ 15 ಎಸ್‌ಆರ್‌ಪಿ 2019
(6) ದಿನಾಂಕ: 05.05.2020ರ ಸರ್ಕಾರಿ ಆದೇಶ ಸಂಖ್ಯೆ: ಆಇ 10 ಎಸ್‌ಆರ್‌ಪಿ 2020
(7) ಭಾರತ ಸರ್ಕಾರದ ದಿನಾಂಕ:20.07.2021ರ ಅಧಿಕೃತ ಜ್ಞಾಪನ ಸಂಖ್ಯೆ: No.1/1/ 2020-E-II(B)

ಪ್ರಸ್ತಾವನೆ:

ಮೇಲೆ(6)ರಲ್ಲಿ ಓದಲಾದ ದಿನಾಂಕ: 05.05.2020ರ ಆದೇಶದಲ್ಲಿ, ಕೋವಿಡ್-19ರ ಸಾಂಕ್ರಾಮಿಕದಿಂದ ಉಂಟಾದ ಸಂಕಷ್ಟಗಳ ಕಾರಣ ಸರ್ಕಾರದ ನೀತಿ ನಿರ್ಣಯದಂತೆ ರಾಜ್ಯ ಸರ್ಕಾರಿ ನೌಕರರಿಗೆ ದಿನಾಂಕ: 01.01.2020ರಿಂದ ದಿನಾಂಕ: 30.06.2021ರ ಅವಧಿಯ ತುಟ್ಟಿಭತ್ಯೆ ದರಗಳನ್ನು ಮುಂದಿನ ಆದೇಶಗಳವರೆಗೆ ಸ್ಥಗಿತಗೊಳಿಸಿ ಆದೇಶಗಳನ್ನು ಹೊರಡಿಸಲಾಗಿರುತ್ತದೆ. ಮೇಲೆ(7)ರಲ್ಲಿ ಓದಲಾದ ದಿನಾಂಕ: 20.07.2021ರ ಜ್ಞಾಪನದಲ್ಲಿ ಭಾರತ ಸರ್ಕಾರವು ಕೇಂದ್ರ ಸರ್ಕಾರದ ನೌಕರರಿಗೆ ದಿನಾಂಕ: 01.01.2020ರಿಂದ ದಿನಾಂಕ: 30.06.2021ರ ಅವಧಿಯ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸಿ ಆದೇಶಗಳನ್ನು ಹೊರಡಿಸಿರುತ್ತದೆ.

ಆದುದರಿಂದ, ರಾಜ್ಯ ಸರ್ಕಾರಿ ನೌಕರರು, ಸ್ಥಳೀಯ ಸಂಸ್ಥೆಗಳು/ನಿಗಮ ಮತ್ತು ಮಂಡಳಿ ಮುಂತಾದವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರಿಗೆ ಲಭ್ಯವಿರುವ ತುಟ್ಟಿಭತ್ಯೆ ದರಗಳನ್ನು ಪರಿಷ್ಕರಿಸುವುದು ಅವಶ್ಯವೆಂದು ಪರಿಗಣಿಸಿರುತ್ತದೆ. ಅದರಂತೆ, ಈ ಕೆಳಕಂಡ ಆದೇಶಗಳನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 18 ಎಸ್‌ಆರ್‌ಪಿ 2021,**
**ಬೆಂಗಳೂರು, ದಿನಾಂಕ 26ನೇ ಜುಲೈ 2021.**

ದಿನಾಂಕ: 01.01.2020ರಿಂದ ದಿನಾಂಕ: 30.06.2021ರ ಅವಧಿಯ ಹೆಚ್ಚುವರಿ ತುಟ್ಟಿಭತ್ಯೆ ಕಂತುಗಳನ್ನು ಬಿಡುಗಡೆಗೊಳಿಸಲು ರಾಜ್ಯ ಸರ್ಕಾರವು ಹರ್ಷಿಸುತ್ತದೆ. ಅದರಂತೆ, **1ನೇ ಜುಲೈ 2021**ರಿಂದ ಜಾರಿಗೆ ಬರುವಂತೆ ರಾಜ್ಯ ಸರ್ಕಾರಿ ನೌಕರರಿಗೆ 2018ರ ಪರಿಷ್ಕೃತ ವೇತನ ಶ್ರೇಣಿಗಳಲ್ಲಿ ನೀಡಲಾಗುವ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ **ಶೇಕಡ 11.25** ರಿಂದ **ಶೇಕಡ 21.50**ಗೆ ಪರಿಷ್ಕರಿಸತಕ್ಕದ್ದು.

2. ತುಟ್ಟಿಭತ್ಯೆಯ ಉದ್ದೇಶಕ್ಕಾಗಿ "ಮೂಲ ವೇತನ" ಎಂದರೆ ಸರ್ಕಾರಿ ನೌಕರನು ಧಾರಣ ಮಾಡಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ವೇತನ ಮತ್ತು ಅದರಲ್ಲಿ,

(ಅ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಸ್ಥಗಿತ ವೇತನ ಬಡ್ತಿಯನ್ನು ನೀಡಲಾಗಿದ್ದರೆ, ಆ ಸ್ಥಗಿತ ವೇತನ ಬಡ್ತಿ,

(ಆ) 2018ರ ಕರ್ನಾಟಕ ನಾಗರಿಕ ಸೇವಾ (ಪರಿಷ್ಕೃತ ವೇತನ) ನಿಯಮಗಳ ನಿಯಮ 3(ಸಿ)ಯನ್ನು ಓದಿಕೊಂಡು 7ನೇ ನಿಯಮದ (3)ನೇ ಉಪನಿಯಮದ ಮೇರೆಗೆ ಅವನಿಗೆ ನೀಡಲಾದ ವೈಯಕ್ತಿಕ ವೇತನ ಯಾವುದಾದರೂ ಇದ್ದರೆ, ಆ ವೈಯಕ್ತಿಕ ವೇತನ,

(ಇ) ವೇತನ ಶ್ರೇಣಿಯ ಗರಿಷ್ಠಕ್ಕಿಂತ ಹೆಚ್ಚಾಗಿ ಅವನಿಗೆ ಮಂಜೂರು ಮಾಡಲಾಗಿರುವ ಹೆಚ್ಚುವರಿ ವೇತನ ಬಡ್ತಿ ಯಾವುದಾದರೂ ಇದ್ದಲ್ಲಿ, ಅವುಗಳು ಸೇರುತ್ತವೆ.

3. ಮೂಲ ವೇತನಕ್ಕೆ ಮೇಲೆ ಸೂಚಿಸಿರುವುದನ್ನು ಹೊರತುಪಡಿಸಿ ಇತರೆ ಯಾವುದೇ ಉಪಲಬ್ಧಗಳನ್ನು ಸೇರಿಸತಕ್ಕದ್ದಲ್ಲ.

4. ರಾಜ್ಯ ಸರ್ಕಾರದ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೆ ಮತ್ತು ರಾಜ್ಯದ ಸಂಚಿತ ನಿಧಿಯಿಂದ ನಿವೃತ್ತಿ ವೇತನ ಮತ್ತು ಕುಟುಂಬ ನಿವೃತ್ತಿ ವೇತನವನ್ನು ಪಡೆಯುತ್ತಿರುವಂತಹ ಅನುದಾನಿತ ಶಿಕ್ಷಣ ಸಂಸ್ಥೆಗಳ ನಿವೃತ್ತಿ ವೇತನದಾರರು/ಕುಟುಂಬ ನಿವೃತ್ತಿ ವೇತನದಾರರಿಗೂ ಸಹ ದಿನಾಂಕ **1ನೇ ಜುಲೈ 2021** ರಿಂದ ಜಾರಿಗೆ ಬರುವಂತೆ ಹಾಲಿ ಲಭ್ಯವಿರುವ ತುಟ್ಟಿಭತ್ಯೆಯ ದರಗಳನ್ನು ಮೂಲ ನಿವೃತ್ತಿ ವೇತನ/ಕುಟುಂಬ ನಿವೃತ್ತಿ ವೇತನದ ಪ್ರಸಕ್ತ **ಶೇಕಡ 11.25** ರಿಂದ **ಶೇಕಡ 21.50**ಕ್ಕೆ ಹೆಚ್ಚಿಸಿ ಮಂಜೂರು ಮಾಡಲು ಸಹ ಸರ್ಕಾರವು ಹರ್ಷಿಸುತ್ತದೆ.

5. ಯುಜಿಸಿ/ಎಐಸಿಟಿಇ/ಐಸಿಎಆರ್ ವೇತನ ಶ್ರೇಣಿಗಳಲ್ಲಿ ವೇತನ ಪಡೆಯುತ್ತಿದ್ದ ನಿವೃತ್ತ ನೌಕರರಿಗೂ ಸಹ ಈ ಆದೇಶಗಳು ಅನ್ವಯಿಸುತ್ತವೆ.

6. ಸರ್ಕಾರದ ಮತ್ತು ಜಿಲ್ಲಾ ಪಂಚಾಯತ್‌ಗಳ ಪೂರ್ಣಾವಧಿ ನೌಕರರಿಗೆ, ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ವರ್ಕ್‌ಚಾರ್ಜ್ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ ಪಡೆಯುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಮತ್ತು ವಿಶ್ವವಿದ್ಯಾಲಯಗಳಲ್ಲಿ ಕಾಲಿಕ ವೇತನ ಶ್ರೇಣಿಗಳಲ್ಲಿರುವ ಪೂರ್ಣಾವಧಿ ನೌಕರರುಗಳಿಗೆ ಈ ಆದೇಶ ಅನ್ವಯಿಸುತ್ತದೆ.

7. ಪ್ರತ್ಯೇಕ ಆದೇಶಗಳನ್ನು ಹೊರಡಿಸುವ ಸಂಬಂಧ ಸಕ್ಷಮ ಪ್ರಾಧಿಕಾರಿಯ ಅನುಮೋದನೆ ಪಡೆಯುವ ರೂಢಿಯ ಪದ್ಧತಿ ಮತ್ತು ನಿಬಂಧನೆಗಳು ಇತ್ಯಾದಿಗಳ ಪೂರೈಕೆಗೊಳಪಟ್ಟು ಕಾಲದಿಂದ ಕಾಲಕ್ಕೆ ರಾಜ್ಯ ಸರ್ಕಾರವು ಹೊರಡಿಸುವ ಆದೇಶಗಳನ್ವಯ ಅನ್ವಯಿಸುವ ತುಟ್ಟಿಭತ್ಯೆ ದರಗಳನ್ನು ರಾಜ್ಯ ಸರ್ಕಾರದ ನಿಗಮ/ಮಂಡಳಿ/ಸ್ಥಳೀಯ ಸಂಸ್ಥೆಗಳು, ಸರ್ಕಾರಿ/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಮತ್ತು ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ, 2012ರಡಿ ಬರುವ ನೌಕರರಿಗೆ ಕ್ರಮಬದ್ಧಗೊಳಿಸಿ ಪರಿಷ್ಕರಿಸುವ ಕುರಿತು ಸೂಕ್ತ ನಿರ್ಧಾರಗಳನ್ನು ಸಕ್ಷಮ ಪ್ರಾಧಿಕಾರಗಳು ಕೈಗೊಳ್ಳಬಹುದಾಗಿರುತ್ತದೆ.

8. ಯುಜಿಸಿ/ಎಐಸಿಟಿಇ/ಐಸಿಎಆರ್/ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಹಾಲಿ ವೇತನ ಪಡೆಯುತ್ತಿರುವ ನೌಕರರಿಗೆ ಮತ್ತು ಎನ್‌ಜೆಪಿಸಿ ಪಿಂಚಣಿದಾರರಿಗೆ ಸಂಬಂಧಿಸಿದಂತೆ ಪ್ರತ್ಯೇಕ ಆದೇಶಗಳನ್ನು ಹೊರಡಿಸಲಾಗುವುದು.

9. ಈ ಆದೇಶದ ಮೇರೆಗೆ ಲಭ್ಯವಿರುವ ತುಟ್ಟಿಭತ್ಯೆಯನ್ನು ನಗದಾಗಿ ಪಾವತಿ ಮಾಡುವುದು.

10. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

11. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ.ಕೆ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಸಂಚಿಕೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ/ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, (ಪಿ.ಬಿ. ನಂ.5398) ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, (ಪಿ.ಬಿ. ನಂ.5329) ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು.
8. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
9. ಎಲ್ಲಾ ಪ್ರಾದೇಶಿಕ ಆಯುಕ್ತರು.
10. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
11. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ವಿಧಾನ ಪರಿಷತ್ತು, ವಿಧಾನಸೌಧ, ಬೆಂಗಳೂರು.
12. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
13. ಕರ್ನಾಟಕ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಉಪ ಕುಲಪತಿಗಳು/ರಿಜಿಸ್ಟ್ರಾರ್‌ಗಳು.
14. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು.
15. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
16. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
17. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
18. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಪ್ರಾಜೆಕ್ಟ್ ಆಫೀಸರ್, ಹೆಚ್.ಆರ್.ಎಂ.ಎಸ್., ಕೊಠಡಿ ಸಂಖ್ಯೆ:145'ಂ', ಬಹುಮಹಡಿಗಳ ಕಟ್ಟಡ, ಬೆಂಗಳೂರು.
20. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
21. ಅಧ್ಯಕ್ಷರು, ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘ(ರಿ), ಕಬ್ಬನ್ ಉದ್ಯಾನವನ, ಬೆಂಗಳೂರು.
22. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
23. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನ ಮಂಡಲದ ಗ್ರಂಥಾಲಯ.
24. ವಾರಪತ್ರ/ಶಾಖೆಯ ರಕ್ಷಾ ಕಡತ.

ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ **www.finance.karnataka.gov.in** ವೀಕ್ಷಿಸಿ.